## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 1267(1330) |
| **ಮಾನ್ಯ ಸದಸ್ಯರ ಹೆಸರು** | ಡಾ. ತಳವಾರ್ ಸಾಬಣ್ಣ (ನಾಮನಿರ್ದೇಶಿತರು) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 16.03.2026 |

| | ಪ್ರಶ್ನೆ | ಉತ್ತರ |
|---|---|---|
| ಅ) | ಹಾವೇರಿ ಜಿಲ್ಲೆಯ ಗೋಟಗೋಡಿಯಲ್ಲಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಕೆಲಸ ಮಾಡುತ್ತಿರುವ ತಾತ್ಕಾಲಿಕ ಸಹಾಯಕ ಪ್ರಾಧ್ಯಾಪಕರು/ಅತಿಥಿ ಉಪನ್ಯಾಸಕರು ವೇತನ ತಾರತಮ್ಯ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.<br><br>ಕರ್ನಾಟಕ ಜಾನಪದ ವಿಶ್ವವಿದ್ಯಾಲಯಗಳ ಅಧಿನಿಯಮ 2011 ಪ್ರಕರಣ 54ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಕುಲಪತಿಗಳು ಪರಿನಿಯಮಗಳ ಮೂಲಕ ನಿಯಮಿಸಲಾದಂತೆ ತಾತ್ಕಾಲಿಕ ನೇಮಕಾತಿಗಳನ್ನು ಮಂಜೂರಾದ ಹುದ್ದೆಗಳಿಗೆ ಎದುರಾಗಿ ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯದ ಶೈಕ್ಷಣಿಕ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗದಂತೆ ನಡೆಸಲಾಗುತ್ತಿದೆ. |
| ಆ) | ಪಕ್ಕದ ಧಾರವಾಡ ವಿಶ್ವವಿದ್ಯಾಲಯದಲ್ಲಿ ಅತಿಥಿ ಉಪನ್ಯಾಸಕರಿಗೆ ವರ್ಷದಲ್ಲಿ 10-11 ತಿಂಗಳ ಕಾರ್ಯಭಾರ ನೀಡಿದರೆ ಜಾನಪದ ವಿಶ್ವವಿದ್ಯಾಲಯದಲ್ಲಿ ಕೇವಲ ವರ್ಷದಲ್ಲಿ 7 ತಿಂಗಳ ಕಾರ್ಯಭಾರ ನೀಡುತ್ತಿರುವುದಕ್ಕೆ ಕಾರಣಗಳೇನು; | ಕರ್ನಾಟಕ ಜನಪದ ವಿಶ್ವವಿದ್ಯಾಲಯವ ಆಯಾ ಶೈಕ್ಷಣಿಕ ಸಾಲಿನ ಬೋಧನಾ ಕಾರ್ಯಭಾರದ ವೇಳಾಪಟ್ಟಿಯಂತೆ ಕಾರ್ಯಭಾರ ನೀಡುತ್ತಿದೆ. |
| ಇ) | ಬೇರೆ ವಿಶ್ವವಿದ್ಯಾಲಯಗಳಲ್ಲಿ ರೂ.35-50 ಸಾವಿರದವರೆಗೆ ಪ್ರತಿ ತಿಂಗಳು ವೇತನ ನೀಡುತ್ತಿದ್ದರೆ ಜಾನಪದ ವಿಶ್ವವಿದ್ಯಾಲಯದಲ್ಲಿ 10 ವರ್ಷದಿಂದ ಕೇವಲ ರೂ.25 ಸಾವಿರ ಪ್ರತಿ ತಿಂಗಳು ವೇತನ ನೀಡುತ್ತಿರುವುದು ತಾರತಮ್ಯವಲ್ಲವೇ; | ಕರ್ನಾಟಕ ಜನಪದ ಸಾಹಿತ್ಯ ಕಲೆ, ಸಂಗೀತ, ರಂಗಭೂಮಿ, ಕರಕುಶಲ ಕಲೆ, ಜಾನಪದ ವೈದ್ಯ ಪದ್ಧತಿ, ಆಹಾರ, ಪಾನಿಯ, ಗುಡಿಕೈಗಾರಿಕೆಯಂತಹ ಕ್ಷೇತ್ರಗಳಲ್ಲಿ ಉನ್ನತ ಶಿಕ್ಷಣ ಮತ್ತು ಸಂಶೋಧನೆ ಅವಕಾಶವನ್ನು ಕಲ್ಪಿಸುವ ದೃಷ್ಟಿಯಿಂದ ವಿಶೇಷ ಕಾಯ್ದೆಯಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿರುತ್ತದೆ.<br><br>ಸದರಿ ವಿಶ್ವವಿದ್ಯಾಲಯಕ್ಕೆ ಯಾವುದೇ ಸಂಯೋಜಿತ ಕಾಲೇಜುಗಳು ಇರುವುದಿಲ್ಲ. ಆಂತರಿಕ ಸಂಪನ್ಮೂಲ ಕ್ರೋಢೀಕರಣದ ಲಭ್ಯತೆಯು ಅಲ್ಪಪ್ರಮಾಣದಲ್ಲಿರುವುದರಿಂದ ಆಯಾ ಶೈಕ್ಷಣಿಕ ಸಾಲಿನ ಬೋಧನಾ ಕಾರ್ಯಭಾರದನ್ವಯ ತಾತ್ಕಾಲಿಕ ಸಹಾಯಕ ಪ್ರಾಧ್ಯಾಪಕರಿಗೆ ಮಾಸಿಕ ವೇತನ ರೂ.25,000 ಗಳನ್ನು ಹಾಗೂ ತಾತ್ಕಾಲಿಕ ಅತಿಥಿ ಉಪನ್ಯಾಸಕರಿಗೆ ರೂ.12,500ಗಳನ್ನು ವಿಶ್ವವಿದ್ಯಾಲಯವು ನೀಡುತ್ತಿದೆ. |

| | | |
|---|---|---|
| ಈ) | ಜಾನಪದ ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ನೇಮಕಾತಿ<br>ಮಾಡಿಕೊಳ್ಳುವುದಿಲ್ಲ, ಮತ್ತು ಆದೇಶ ಪತ್ರ ನೀಡಿರುವುದಕ್ಕೆ ಕಾರಣವೇನು; | ಕರ್ನಾಟಕ ಜಾನಪದ ವಿಶ್ವವಿದ್ಯಾಲಯಗಳ ಅಧಿನಿಯಮ 2011 ಪ್ರಕರಣ 54ರಲ್ಲಿ ಪ್ರದತ್ತವಾದ ಅಧಿಕಾರದನ್ವಯ ಕುಲಪತಿಗಳು ಪರಿನಿಯಮಗಳ ಮೂಲಕ ನಿಯಮಿಸಲಾದಂತೆ ತಾತ್ಕಾಲಿಕ ನೇಮಕಾತಿಗಳನ್ನು ಮಂಜೂರಾದ ಹುದ್ದೆಗಳಿಗೆ ಎದುರಾಗಿ ಖಾಲಿಯಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ವಿಳಂಬವಿಲ್ಲದೆ, ಒಂದು ವರ್ಷಕ್ಕೆ ಮೀರದ ಅವಧಿಗೆ ತಾತ್ಕಾಲಿಕ ನೇಮಕಾತಿಗಳನ್ನು ಮಾಡಲು ನಿಯಮವನ್ನು ಕಲ್ಪಿಸಲಾಗಿದೆ.<br><br>ಅದರನ್ವಯ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದಲ್ಲಿ ಪ್ರತಿ ಶೈಕ್ಷಣಿಕ ವರ್ಷ ಬೋಧನಾ ಕಾರ್ಯಗಳು ಆರಂಭವಾಗುವ ಮುಂಚಿತವಾಗಿ ದಿನಪತ್ರಿಕೆಗಳಲ್ಲಿ ತಾತ್ಕಾಲಿಕ ಉಪನ್ಯಾಸಕರ/ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಅಧಿಸೂಚನೆ ಹೊರಡಿಸಿ, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ನಿಯಮಾನುಸಾರ ಸಂದರ್ಶನ ನಡೆಸಿ ಆಯ್ಕೆ ಮಾಡಿ ಆದೇಶ ಹೊರಡಿಸಿ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಿದೆ. |

**ಸಂಖ್ಯೆ**: ಇಡಿ 69 ಯುಎನ್ಇ 2026

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು